# ಕರ್ನಾಟಕ ವಿಧಾನ ಪರಿಷತ್ತು

**ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ** : 08
**ಮಾನ್ಯ ಸದಸ್ಯರ ಹೆಸರು** : ಶ್ರೀ ಕೆ. ಹರೀಶ್ ಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು )
**ಉತ್ತರಿಸಬೇಕಾದ ದಿನಾಂಕ** : 12-09-2022
**ಉತ್ತರಿಸುವ ಸಚಿವರು** : ಪ್ರವಾಸೋದ್ಯಮ, ಜೀವಿಶಾಸ್ತ್ರ, ಮತ್ತು ಪರಿಸರ ಸಚಿವರು

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ದಕ್ಷಿಣ ಕನ್ನಡ ಜಿಲ್ಲೆ ಬೆಳ್ತಂಗಡಿ ತಾಲ್ಲೂಕು ಜಮಲಾಬಾದ್ ಕೋಟೆ ಚಂದ್ಕೂರು ದೇವಸ್ಥಾನದ ಬಳಿ ಇರುವ ಪ್ರವಾಸೋದ್ಯಮ ಇಲಾಖೆಯ ವಸತಿಗೃಹದ ಕಾಮಗಾರಿ ಪ್ರಾರಂಭಗೊಂಡಿದ್ದು ಯಾವಾಗ; | ದಕ್ಷಿಣ ಕನ್ನಡ ಜಿಲ್ಲೆ ಬೆಳ್ತಂಗಡಿ ತಾಲ್ಲೂಕಿನ ನಡ ಗ್ರಾಮದ ಜಮಲಾಬಾದ್ ಕೋಟೆ ಪ್ರದೇಶದಲ್ಲಿ ಯಾತ್ರಿ ನಿವಾಸ ನಿರ್ಮಾಣ ಕಾಮಗಾರಿಯನ್ನು ರೂ.40.00ಲಕ್ಷಗಳ ಅಂದಾಜು ಮೊತ್ತದಲ್ಲಿ ಕೈಗೊಳ್ಳಲು ದಿನಾಂಕ: 13-06-2018 ರಂದು ಆಡಳಿತಾತ್ಮಕ ನೀಡಿದ್ದು, ಕಾಮಗಾರಿ ಪ್ರಾರಂಭಿಸಲಾಗಿದೆ. |
| ಆ) | ಸದರಿ ಕಾಮಗಾರಿಗಳ ಪ್ರಗತಿ ಕಾರ್ಯ ಯಾವ ಹಂತದಲ್ಲಿದೆ; ಸಂಪೂರ್ಣವಾಗದಿರಲು ಕಾರಣವೇನು; ಯಾವ ಕಾಲಮಿತಿಯಲ್ಲಿ ಪೂರ್ಣಗೊಳಿಸಲಾಗುವುದು; (ವಿಸ್ತೃತವಾದ ವರದಿಯನ್ನು ನೀಡುವುದು) | ಸದರಿ ಕಾಮಗಾರಿಯ ಕಟ್ಟಡದ ಒಳಭಾಗದ ಗಾರೆ ಕೆಲಸ ಪೂರ್ಣಗೊಂಡಿದೆ. ಸದರಿ ಕಾಮಗಾರಿಗೆ ಇಲಾಖೆಯಿಂದ ಈಗಾಗಲೇ ರೂ.20.00 ಲಕ್ಷಗಳನ್ನು ಬಿಡುಗಡೆಗೊಳಿಸಿದ್ದು, ಅದರನ್ವಯ ಕಾಮಗಾರಿ ಕೈಗೊಂಡಿದ್ದು, ರೂ.20.00 ಲಕ್ಷಗಳಿಗೆ ಅನುಷ್ಠಾನ ಸಂಸ್ಥೆಯವರು ಈಗಾಗಲೇ ಹಣಬಳಕೆ ಪ್ರಮಾಣ ಪತ್ರವನ್ನು ಸಲ್ಲಿಸಿರುತ್ತಾರೆ.<br><br>ಪ್ರವಾಸೋದ್ಯಮ ಇಲಾಖೆಗೆ ಕೋವಿಡ್-19ರ ಹಿನ್ನಲೆಯಲ್ಲಿ, 2020-21 ಮತ್ತು 2021-22ನೇ ಸಾಲುಗಳಲ್ಲಿ ಬಂಡವಾಳ ವೆಚ್ಚಗಳ ಲೆಕ್ಕಶೀರ್ಷಿಕೆಯಡಿಯಲ್ಲಿ ಕ್ರಮವಾಗಿ ರೂ.35.00 ಕೋಟಿ ಹಾಗೂ ರೂ.71.00 ಕೋಟಿಗಳನ್ನು ಮಾತ್ರ ಒದಗಿಸಿದ್ದು, ಸದರಿ ಲೆಕ್ಕಶೀರ್ಷಿಕೆಯಡಿಯಲ್ಲಿ ಎರಡು ಸಾಲುಗಳಲ್ಲಿ 900ಕ್ಕೂ ಅಧಿಕ ಮುಂದುವರೆದ ಕಾಮಗಾರಿಗಳಿದ್ದು, ಈ ಪೈಕಿ ಪೂರ್ಣಗೊಂಡಿರುವ ಹಾಗೂ ಪೂರ್ಣಗೊಳ್ಳುವ ಹಂತದಲ್ಲಿರುವ ಕಾಮಗಾರಿಗಳಿಗೆ ಅನುದಾನವನ್ನು ಬಿಡುಗಡೆ ಮಾಡಲಾಗಿರುತ್ತದೆ. ಆದುದರಿಂದ, 2020-21 ಮತ್ತು 2021-22ನೇ ಸಾಲುಗಳಲ್ಲಿ ಅನುದಾನದ ಕೊರತೆಯಿಂದ ಸದರಿ ಕಾಮಗಾರಿಗೆ ಅನುದಾನ ಬಿಡುಗಡೆ ಮಾಡಲು ಸಾಧ್ಯವಾಗಿರುವುದಿಲ್ಲ.<br><br>ಸದರಿ ಕಾಮಗಾರಿಯ ಅನುಷ್ಠಾನ ಸಂಸ್ಥೆಯಾದ ನಿರ್ಮಿತಿ ಕೇಂದ್ರದವರು ಅನುದಾನ ಬಿಡುಗಡೆಯಾದಲ್ಲಿ 6 ತಿಂಗಳ ಒಳಗಾಗಿ ಕಾಮಗಾರಿ ಪೂರ್ಣಗೊಳಿಸುವುದಾಗಿ ತಿಳಿಸಿರುತ್ತಾರೆಂದು ಉಪನಿರ್ದೇಶಕರು, ಪ್ರವಾಸೋದ್ಯಮ ಇಲಾಖೆ, ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರುರವರು ವರದಿ ನೀಡಿರುತ್ತಾರೆ.<br><br>ಮುಂದುವರೆದು, ಸದರಿ ಕಾಮಗಾರಿಗೆ 2022-23ನೇ ಸಾಲಿನಲ್ಲಿ ಕಾಯ್ದಿರಿಸಿರುವ ಬಾಕಿ ಅನುದಾನವನ್ನು ಬಿಡುಗಡೆ ಮಾಡಲು ಅಗತ್ಯ ಕ್ರಮವಹಿಸಲಾಗುವುದು. |
| ಇ) | ಸದರಿ ಕಾಮಗಾರಿಯ ಯೋಜನಾ ಮೊತ್ತವೆಷ್ಟು; ಪಾವತಿ ಮಾಡಲಾದ ಮೊತ್ತವೆಷ್ಟು; ಬಾಕಿ ಇರುವ ಮೊತ್ತವೆಷ್ಟು? (ಅಂಕಿ-ಅಂಶಗಳೊಂದಿಗೆ ಸಂಪೂರ್ಣ ಮಾಹಿತಿ ನೀಡುವುದು) | ಸದರಿ ಕಾಮಗಾರಿಯ ಯೋಜನಾ ಮೊತ್ತ ರೂ.40.00 ಲಕ್ಷಗಳು; ಈವರೆಗೂ ಪಾವತಿ ಮಾಡಲಾದ ಮೊತ್ತ ರೂ. 20.00 ಲಕ್ಷಗಳು; ಬಾಕಿ ಇರುವ ಮೊತ್ತ ರೂ.20.00 ಲಕ್ಷಗಳು. |

**TOR 239 TDV 2022**

**(ಆನಂದ್ ಸಿಂಗ್)**
ಪ್ರವಾಸೋದ್ಯಮ,
ಜೀವಿಶಾಸ್ತ್ರ, ಮತ್ತು ಪರಿಸರ ಸಚಿವರು